# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ** | **488** |
| **ಮಾನ್ಯ ಸದಸ್ಯರ ಹೆಸರು** | **ಶ್ರೀ ಶಶೀಲ ಜಿ. ನಮೋಶಿ (ಶಿಕ್ಷಕರ ಕ್ಷೇತ್ರ)** |
| **ಉತ್ತರಿಸುವ ಸಚಿವರು** | **ಉನ್ನತ ಶಿಕ್ಷಣ ಸಚಿವರು** |
| **ಉತ್ತರಿಸಬೇಕಾದ ದಿನಾಂಕ** | **10.03.2025** |

| | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಸರಕಾರದಲ್ಲಿ ಪ್ರಾರಂಭವಾಗಿರುವ ಹೊಸ ವಿಶ್ವವಿದ್ಯಾಲಯಗಳ ಸಂಖ್ಯೆ ಎಷ್ಟು; (ವಿವರವಾದ ಮಾಹಿತಿ ನೀಡುವುದು) | ಕಳೆದ ಸರಕಾರದಲ್ಲಿ ಒಟ್ಟು 12 ಹೊಸ ವಿಶ್ವವಿದ್ಯಾಲಯಗಳನ್ನು ಪ್ರಾರಂಭಿಸಲಾಗಿರುತ್ತದೆ. ವಿವರ ಈ ಕೆಳಕಂಡಂತಿದೆ; |

| ಕ್ರ.ಸಂ. | ವಿಶ್ವವಿದ್ಯಾಲಯ | ಸ್ಥಾಪಿಸಲ್ಪಟ್ಟ ವರ್ಷ |
|---|---|---|
| 1 | ಮಂಡ್ಯ ವಿಶ್ವವಿದ್ಯಾಲಯ, ಮಂಡ್ಯ | 2019 |
| 2 | ರಾಯಚೂರು ವಿಶ್ವವಿದ್ಯಾಲಯ, ರಾಯಚೂರು | 2019 |
| 3 | ಮಹಾರಾಣಿ ಕ್ಲಸ್ಟರ್ ವಿಶ್ವವಿದ್ಯಾಲಯ, ಬೆಂಗಳೂರು | 2019 |
| 4 | ನೃಪತುಂಗ ವಿಶ್ವವಿದ್ಯಾಲಯ, ಬೆಂಗಳೂರು | 2020 |
| 5 | ವಿಶ್ವೇಶ್ವರಯ್ಯ ಕಾಲೇಜ್ ಆಫ್ ಇಂಜಿನಿಯರಿಂಗ್ ವಿಶ್ವವಿದ್ಯಾಲಯ (UVCE) | 2021 |
| 6 | ಹಾಸನ ವಿಶ್ವವಿದ್ಯಾಲಯ, ಹಾಸನ | 2023 |
| 7 | ಹಾವೇರಿ ವಿಶ್ವವಿದ್ಯಾಲಯ, ಹಾವೇರಿ | 2023 |
| 8 | ಕೊಪ್ಪಳ ವಿಶ್ವವಿದ್ಯಾಲಯ, ಕೊಪ್ಪಳ | 2023 |
| 9 | ಬೀದರ್ ವಿಶ್ವವಿದ್ಯಾಲಯ, ಬೀದರ್ | 2023 |
| 10 | ಚಾಮರಾಜನಗರ ವಿಶ್ವವಿದ್ಯಾಲಯ, ಚಾಮರಾಜನಗರ | 2023 |
| 11 | ಕೊಡಗು ವಿಶ್ವವಿದ್ಯಾಲಯ, ಕೊಡಗು ಜಿಲ್ಲೆ | 2023 |
| 12 | ಬಾಗಲಕೋಟೆ ವಿಶ್ವವಿದ್ಯಾಲಯ, ಬಾಗಲಕೋಟೆ | 2023 |

| | ಪ್ರಶ್ನೆ | ಉತ್ತರ |
|---|---|---|
| ಆ) | ಇತ್ತೀಚೆಗೆ ಪ್ರಾರಂಭವಾಗಿರುವ ವಿಶ್ವವಿದ್ಯಾಲಯಗಳ ಬಗ್ಗೆ ಅಧ್ಯಯನ ಮಾಡಲು ರಾಜ್ಯದ ಉಪ ಮುಖ್ಯಮಂತ್ರಿಗಳ ನೇತೃತ್ವದ ಸಂಪುಟ ಉಪ ಸಮಿತಿ ರಚನೆ ಮಾಡಿರುವುದು ನಿಜವೇ (ಸಮಿತಿ ಸದಸ್ಯರ ಮಾಹಿತಿ ನೀಡುವುದು) | ರಾಜ್ಯದಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ವಿಶ್ವವಿದ್ಯಾಲಯಗಳನ್ನು ಒಳಗೊಂಡಂತೆ ರಾಜ್ಯದಲ್ಲಿರುವ ಎಲ್ಲಾ ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿಗಳ ಬಗ್ಗೆ ಪರಾಮರ್ಶಿಸಿ ಸೂಕ್ತ ಶಿಫಾರಸ್ಸುಗಳನ್ನು ಮಾಡಲು ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ: ಸಸಂಶಾ 17 ಸಿಎಸ್‌ಸಿ 2024 ದಿನಾಂಕ: 17.08.2024ರನ್ವಯ ಸನ್ಮಾನ್ಯ ಉಪಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಈ ಕೆಳಕಂಡ ಸದಸ್ಯರುಗಳನ್ನೊಳಗೊಂಡ ಸಚಿವ ಸಂಪುಟ ಉಪಸಮಿತಿಯನ್ನು ರಚಿಸಲಾಗಿದ್ದು, ವಿಷಯವು ಸರ್ಕಾರದ ಪರಿಶೀಲನೆಯಲ್ಲಿರುತ್ತದೆ. |
| ಇ) | ಸದರಿ ಸಂಪುಟ ಉಪ ಸಮಿತಿ ನಿರ್ಣಯ ಕೈಗೊಳ್ಳುವಾಗ ಶಿಕ್ಷಣ ತಜ್ಞರ ಅಭಿಪ್ರಾಯಗಳನ್ನು ಪಡೆಯಲಾಗಿದೆಯೇ; (ವಿವರವಾದ ಮಾಹಿತಿ ನೀಡುವುದು) | |

| | | |
|---|---|---|
| 1 | ಶ್ರೀ ಡಿ.ಕೆ.ಶಿವಕುಮಾರ್, ಸನ್ಮಾನ್ಯ ಉಪ ಮುಖ್ಯಮಂತ್ರಿಗಳು | ಅಧ್ಯಕ್ಷರು |
| 2 | ಡಾ: ಹೆಚ್.ಸಿ.ಮಹಾದೇವಪ್ಪ, ಮಾನ್ಯ ಸಮಾಜ ಕಲ್ಯಾಣ ಸಚಿವರು | ಸದಸ್ಯರು |
| 3 | ಶ್ರೀ ಕೃಷ್ಣಭೈರೇಗೌಡ, ಮಾನ್ಯ ಕಂದಾಯ ಸಚಿವರು | ಸದಸ್ಯರು |
| 4 | ಶ್ರೀ ಸಂತೋಷ್ ಎಸ್.ಲಾಡ್, ಮಾನ್ಯ ಕಾರ್ಮಿಕ ಸಚಿವರು, | ಸದಸ್ಯರು |
| 5 | ಡಾ: ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಮಾನ್ಯ ವೈದ್ಯಕೀಯ ಶಿಕ್ಷಣ ಮತ್ತು ಕೌಶಲ್ಯಾಭಿವೃದ್ಧಿ ಸಚಿವರು | ಸದಸ್ಯರು |
| 6 | ಡಾ: ಎಂ.ಸಿ.ಸುಧಾಕರ ಮಾನ್ಯ ಉನ್ನತ ಶಿಕ್ಷಣ ಸಚಿವರು | ಸದಸ್ಯರು |

| | | |
|---|---|---|
| ಈ) | ಸಂಪುಟ ಉಪ ಸಮಿತಿ ವರದಿಯಲ್ಲಿ ಉಲ್ಲೇಖಿಸಲಾದ ಪ್ರಮುಖ ಅಂಶಗಳು ಯಾವುವು; ಈ ಕುರಿತು ಸರ್ಕಾರ ಕೈಗೊಳ್ಳುತ್ತಿರುವ ಕ್ರಮಗಳಾವುವು? (ವಿವರ ನೀಡುವುದು) | ಸಂಪುಟ ಉಪ ಸಮಿತಿಯು ಯಾವುದೇ ವರದಿಯನ್ನು ಸಿದ್ಧಪಡಿಸಿರುವುದಿಲ್ಲ. ಸಮಿತಿಯು ವಿಶ್ವವಿದ್ಯಾಲಯಗಳು ಎದುರಿಸುತ್ತಿರುವ ಎಲ್ಲಾ ಸಮಸ್ಯೆಗಳೊಂದಿಗೆ ರಾಜ್ಯದಲ್ಲಿನ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿ ಹಾಗೂ ಅವರ ಮುಂಬರುವ ಭವಿಷ್ಯದ ಹಿತದೃಷ್ಟಿಯನ್ನು ಗಮನದಲ್ಲಿರಿಸಿಕೊಂಡು ವಿದ್ಯಾರ್ಥಿಗಳಿಗೆ ಗುಣಾತ್ಮಕ ಶೈಕ್ಷಣಿಕ ವ್ಯವಸ್ಥೆಯನ್ನು ಕಲ್ಪಿಸುವ ನಿಟ್ಟಿನಲ್ಲಿ ನೂತನವಾಗಿ ಸ್ಥಾಪಿಸಲ್ಪಟ್ಟ ಕೆಲವು ವಿಶ್ವವಿದ್ಯಾಲಯಗಳ ಆರ್ಥಿಕ ಪರಿಸ್ಥಿತಿ, ವಿದ್ಯಾರ್ಥಿಗಳ ಪ್ರವೇಶಾತಿ, ಮೂಲಸೌಲಭ್ಯದ ಕೊರತೆ ಮುಂತಾದ ಪ್ರಮುಖ ಅಂಶಗಳ ಕುರಿತು ಮೊದಲ ಸಭೆಯಲ್ಲಿ ಚರ್ಚಿಸಲಾಗಿದ್ದು, ಸಭೆಯಲ್ಲಿ ಸ್ವೀಕೃತವಾದ ಸಲಹೆಗಳನ್ನು ಪರಾಮರ್ಶಿಸಿ ಕೆಲವು ವಿಶ್ವವಿದ್ಯಾಲಯಗಳ ವಿಲೀನ, ಹೆಚ್ಚಿನ ಅನುದಾನದ ಅಗತ್ಯತೆ ಮತ್ತು ಹಂತ-ಹಂತವಾಗಿ ಖಾಲಿ ಹುದ್ದೆಗಳ ಭರ್ತಿ ಸೇರಿದಂತೆ ವಿಶ್ವವಿದ್ಯಾಲಯಗಳ ಬಲವರ್ಧನೆಗಾಗಿ ಉನ್ನತ ಶಿಕ್ಷಣ ಇಲಾಖೆ ಮತ್ತು ಆರ್ಥಿಕ ಇಲಾಖೆಯು ಒಟ್ಟಾರೆ ಸೇರಿ ವಿಸ್ತೃತವಾದ ವರದಿ/ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಮಂಡಿಸಿ ಸೂಕ್ತ ತೀರ್ಮಾನ ಕೈಗೊಳ್ಳುವ ಬಗ್ಗೆ ಪರಿಶೀಲಿಸಲಾಗುತ್ತಿದೆ. |

ಸಂಖ್ಯೆ: ಇಡಿ 86 ಯುಎನ್ಇ 2025

**(ಡಾ: ಎಂ.ಸಿ. ಸುಧಾಕರ್)**
ಉನ್ನತ ಶಿಕ್ಷಣ ಸಚಿವರು